# ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಚೇರಿ, ಕೊಪ್ಪಳ

**ಅಧಿಸೂಚನೆ ಸಂಖ್ಯೆ- 3/2018 ದಿನಾಂಕಃ 27/09/2018.**

ವಿಷಯಃ ಕೊಪ್ಪಳ ನ್ಯಾಯಾಂಗ ಇಲಾಖೆಯಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ ಹುದ್ದೆಗಳಿಗೆ ನೇಮಕಾತಿ ಕುರಿತು.

ಉಲ್ಲೇಖಃ

1. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: **LCA-II. 128/2012** ದಿನಾಂಕ **13.02.2017.**
2. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: **LCA-II. 128/2012** ದಿನಾಂಕ **18.09.2018.**
3. ಸರಕಾರಿ ಆದೇಶ ಸಂಖ್ಯೆ. LAW 189 LCE 2013 ದಿನಾಂಕಃ 12-02-2015
4. ಸರಕಾರಿ ಆದೇಶ ಸಂಖ್ಯೆ. LAW 137 LCE 2014 ದಿನಾಂಕಃ 28-03-2016
5. ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ಮತ್ತು ತಿದ್ದುಪಡಿ ಹಾಗೂ ಸಂಭಂಧಿಸಿದ ಆದೇಶಗಳು.
6. ಈ ನ್ಯಾಯಾಲಯದ ಟಿಪ್ಪಣಿ ಹಾಗೂ ಅದೇಶ .

ಮೇಲ್ಕಂಡ ಅಧಿಸೂಚನೆ ಅನ್ವಯ ಕೊಪ್ಪಳ ಜಿಲ್ಲಾ ನ್ಯಾಯಾಲಯ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ 11 ಶೀಘ್ರಲಿಪಿಗಾರ ರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ನಿಗದಿಪಡಿಸಿದ ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಪ್ರತಿಯಲ್ಲಿಯೇ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ ದಿನಾಂಕಃ **29-10-2018** ರಂದು ಸಂಜೆ **5-00** ಗಂಟೆಯೊಳಗೆ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕಃ **29-10-2018** ಸಂಜೆ **5-00** ಗಂಟೆವರೆಗೆ

ಅರ್ಜಿ ಸಲ್ಲಿಸಬೇಕಾದ ವಿಳಾಸ : ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಪ್ಪಳ.

**I.** ಹುದ್ದೆಯ ಪದನಾಮ : ಶೀಘ್ರಲಿಪಿಗಾರರು    ಖಾಲಿ ಹುದ್ದೆಗಳ ಸಂಖ್ಯೆ : **11**

ವೇತನ ಶ್ರೇಣಿ : **27650-650-29600-750-32600-850-36000-950-39800-1100-46400-1250-52650** ಮತ್ತು ಇತರೆ ಭತ್ಯೆಗಳು

## ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದಕ್ಕೆ 09 ಹುದ್ದೆಗಳ ವರ್ಗೀಕರಣ

## Hyderabad Karnataka Local Cadre)

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಒಟ್ಟು |
|---|---|---|---|---|
| ಪರಿಶಿಷ್ಟ ಜಾತಿ | 1 | 1 | 1 | 3 |
| ಪ್ರವರ್ಗ - II (ಎ) | - | 1 | - | 1 |
| ಪ್ರವರ್ಗ - III (ಎ) | 1 | - | - | 1 |
| ಸಾಮಾನ್ಯ ವರ್ಗ | - | 2 | 2 | 4 |
| ಒಟ್ಟು | 2 | 4 | 3 | 9 |

## ಉಳಿಕೆ ಮೂಲ ವೃಂದಕ್ಕೆ 02 ಹುದ್ದೆಗಳ ವರ್ಗೀಕರಣ

## (Residual Parent Cadre)

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಒಟ್ಟು |
|---|---|---|---|---|
| ಪರಿಶಿಷ್ಟ ಪಂಗಡ | 1 | - | - | 1 |
| ಪ್ರವರ್ಗ - I | 1 | - | - | 1 |
| ಒಟ್ಟು | 2 | - | - | 2 |

ಶೈಕ್ಷಣಿಕ ವಿದ್ಯಾರ್ಹತೆ

1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.
2) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆಯ ಹಿರಿಯ ದರ್ಜೆ **(Senior Grade)** ಶೀಘ್ರಲಿಪಿ ಮತ್ತು ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿರಬೇಕು.
3) ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.

ವಯೋಮಿತಿ :

1) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ **18** ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
2) ಗರಿಷ್ಠ ವಯೋಮಿತಿ :

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ, | 38 ವರ್ಷ |
| ಪ.ಜಾ / ಪ.ಪಂ / ಪ್ರ- 1 | 40 ವರ್ಷ |

1) ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ,ಅಂಗವಿಕಲರಿಗೆ, ಪ.ಜಾ / ಪ.ಪಂ / ಪ್ರ- 1, 2ಎ, 2ಬಿ, 3ಎ, 3ಬಿ, ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಮೀಸಲಾತಿ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು)

**ಅರ್ಜಿಯೊಂದಿಗೆ ಲಗತ್ತಿಸಬೇಕಾದ ಸ್ವಯಂ ದೃಢೀಕರಿಸಿದ ದಾಖಲೆಗಳು (ಮೂಲ ಪ್ರತಿಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ)**

1. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ /ವರ್ಗಾವಣೆ ಪ್ರಮಾಣ ಪತ್ರ.
2. ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳು ಹಾಗೂ ಇತರೆ ಪ್ರಮಾಣ ಪತ್ರಗಳು
3. ತಮ್ಮ ನಡತೆ ಬಗ್ಗೆ ಅಭ್ಯರ್ಥಿ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಎರಡು ನಡತೆ ಪ್ರಮಾಣ ಪತ್ರಗಳು ಹಾಗೂ ಕೊನೆಯಲ್ಲಿ ವ್ಯಾಸಂಗ ಮಾಡಿದ ಶಾಲೆ/ವಿದ್ಯಾಲಯದಿಂದ ಪಡೆದ ಒಂದು ಪ್ರಮಾಣ ಪತ್ರ.
4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪ್ರವರ್ಗ- 2ಎ, ಗ್ರಾಮೀಣ ಮೀಸಲಾತಿ, ಅಂಗವಿಕಲ ಮೀಸಲಾತಿ ಪ್ರಮಾಣಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಇರಬೇಕು.
5. ಅನುಚ್ಛೇಧ 371(ಜೆ)ರಡಿ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನೀಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ನಿಗದಿತ ನಮೂನೆಯಲ್ಲಿಯೇ ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಸಹಾಯಕ ಆಯುಕ್ತರಿಂದ (Assistant Commissioner) ಪಡೆದ ಅರ್ಹತಾ ಪ್ರಮಾಣ ಪತ್ರದ ಪ್ರತಿ (Aannexure-A)ಮತ್ತು ಸರ್ಕಾರಿ ಸೇವೆಯಲ್ಲಿರುವ ನೌಕರರು ತಮ್ಮ ವೃಂದ ನಿಯಂತ್ರಣ ಪ್ರಾಧಿಕಾರ / ಕಛೇರಿ ಮುಖ್ಯಸ್ಥರಿಂದ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರದ ಪ್ರತಿ.
6. ಅಭ್ಯರ್ಥಿಗಳು ತಮ್ಮ ಅರ್ಜಿಯೊಂದಿಗೆ 5-00 ರೂಪಾಯಿ ಅಂಚೆ ಮುದ್ರಾಂಕ (ಪೋಸ್ಟಲ್ ಸ್ಟ್ಯಾಂಪ್) ವನ್ನು ಹೊಂದಿರುವ ಸ್ವ-ವಿಳಾಸದ ಲಕೋಟೆ.

**ಅರ್ಹತಾ ಪರೀಕ್ಷೆ**

1) ಅಭ್ಯರ್ಥಿಗಳಿಗೆ ಕನ್ನಡ ಭಾಷೆಯಲ್ಲಿ ಒಂದು ನಿಮಿಷಕ್ಕೆ 260 ಅಕ್ಷರಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಿ ಅದನ್ನು ಬೆರಳಚ್ಚು ಯಂತ್ರದ/ಕಂಪ್ಯೂಟರ್ ಮೇಲೆ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

2) ಅಭ್ಯರ್ಥಿಗಳಿಗೆ ಇಂಗ್ಲೀಷ್ ಭಾಷೆಯಲ್ಲಿ ಒಂದು ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಿ ಅದನ್ನು ಬೆರಳಚ್ಚು ಯಂತ್ರದ/ಕಂಪ್ಯೂಟರ್ ಮೇಲೆ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

**ಆಯ್ಕೆ ವಿಧಾನ:**

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟ್ರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರನೇಮಕಾತಿಯ ಮೂಲಕ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಾನುಸಾರ ಆಯ್ಕೆ ಮಾಡಲಾಗುವುದು.

ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು **ಪ್ರತಿಯೊಂದರಲ್ಲಿ** ತೇರ್ಗಡೆಯಾಗಲು ಕನಿಷ್ಟ 50 ಅಂಕಗಳು ಪಡೆಯಬೇಕು ಮತ್ತು **ಎರಡೂ** ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು 1: 5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ. **ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡುವ ಜ್ಞಾನವು ಅವಶ್ಯವಾಗಿರುತ್ತದೆ.**

ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡಾವಾರು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಪರಿವೀಕ್ಷಣಾ ಅವಧಿ :** **ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮಗಳಂತೆ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು.**

**ಪಿಂಚಣಿ ಸೌಲಭ್ಯ :** **ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್)/04/ಪಿಇಟಿ/2005 ದಿನಾಂಕ: 31-3-2006 ರಂತೆ ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್) ಅನ್ವಯಿಸುವುದು.**

**ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರಕಾರದ ಅಧಿಸೂಚನೆ ಸಂಖ್ಯೆ: DPAR/43/SCR/2008 ಬೆಂಗಳೂರು ದಿನಾಂಕ: 07-03-2012ರಂತೆ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಿಯಮಾನುಸಾರ ಉತ್ತೀರ್ಣವಾಗತಕ್ಕದ್ದು ಇಲ್ಲವಾದಲ್ಲಿ ಅವರ ಆಯ್ಕೆಯನ್ನು ರದ್ದುಪಡಿಸಲಾಗುವುದು.**

**ಸೂಚನೆಗಳು :**

**1) ಶೀಘ್ರಲಿಪಿಗಾರ ಹುದ್ದೆಗಳ ಅಭ್ಯರ್ಥಿಗಳಿಗೆ ಅರ್ಹತಾ ಪರೀಕ್ಷೆಗಳನ್ನು ನಡೆಸಿ ಅರ್ಹ ಅಭ್ಯರ್ಥಿಗಳಿಗೆ ಮಾತ್ರ 1:5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆ ನೀಡಲಾಗುವುದು.**

2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

3) ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

4) ಅಪೂರ್ಣವಾಗಿರುವ ಸಹಿ ಮಾಡದ ಮತ್ತು ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5) ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸಮುಚ್ಚಿತ ಮಾರ್ಗದ ಮುಖಾಂತರ ಸಲ್ಲಿಸಬೇಕು.

6) ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕೆ ಹಾಜರಾಗುವುದು.

7) ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

8) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಅಂಗ ವಿಕಲ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ಬ್ಯಾಕ್‌ಲಾಗ್ ಎಂದು ನೇಮಕಾತಿ ಪ್ರಕ್ರಿಯೆ ಮಾಡಲಾಗುವುದು.

9) ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯ ದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅನರ್ಹರಾಗುತ್ತಾರೆ.

10) ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ.

11) ಅಭ್ಯರ್ಥಿಗಳ ಅರ್ಹತೆಯ ಮತ್ತು ಆಯ್ಕೆ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

12) ಮೇಲ್ಕಾಣಿಸಿದ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂಧರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ. ಪರಿಕ್ಷೋತ್ತರದ ನಂತರದ (ಆಯ್ಕೆ ಪಟ್ಟಿ ಸಿದ್ದಪಡಿಸುವ ಅವ

ಧಿಯೊಳಗೆ) ಸೃಷ್ಟಿಯಾಗುವ ಹುದ್ದೆಗಳನ್ನೂ ಸಹ ಸೇರ್ಪಡೆ ಅಧಿಸೂಚನೆಯ ಮೂಲಕ ಅ ಧಿಸೂಚಿಸಲಾಗುವುದು.

13) ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವು ದಿಲ್ಲ, ಅಂಚೆಯ ಮತ್ತು ಕೋರಿಯರ್ ಮೂಲಕ ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ,

14) ಅಭ್ಯರ್ಥಿ ಯು ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿದ ಜಾಗೆಯಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು .

15) ಒಂದಕ್ಕಿಂತಾ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕ ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು . ಒಂದೇ ಹುದ್ದೆಗೆ ವಿವಿಧ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವವರು ಪ್ರತ್ಯೇಕವಾಗಿ ಅರ್ಜಿ ಗಳನ್ನು ಸಲ್ಲಿಸತಕ್ಕದ್ದು ಹಾಗೂ ಆ ಅರ್ಜಿ ಗಳಲ್ಲಿ ಕಡ್ಡಾಯವಾಗಿ ಯಾವ ವರ್ಗ/ಮೀಲಸಾತಿಯಡಿಯಲ್ಲಿ ಅರ್ಜಿ ಗಳನ್ನು ಸಲ್ಲಿಸುತ್ತಿರುವಿರಿ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು .

ಇದರಮಾಹಿತಿಯನ್ನು www.ecourts.gov.in/india/karnataka/koppal/recruitment ರಲ್ಲಿಯೂ ಪಡೆಯಬುದು.

(ಸಂಜೀವ ವಿ.ಕುಲಕರ್ಣಿ)
ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,ಕೊಪ್ಪಳ.

ಪ್ರತಿಯನ್ನು ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

ಪ್ರತಿಯನ್ನು :

ಅಧಿಸೂಚನೆಯ ನಕಲನ್ನು

ಮಾನ್ಯ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಪ್ರತ್ಯೇಕ ಪತ್ರದೊಂದಿಗೆ ಅವಗಾಹನೆಗಾಗಿ ಸಲ್ಲಿಸಲಾಗಿದೆ,

ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ

1. ಉಪನಿರ್ದೇಶಕರು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕೊಪ್ಪಳ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ : ವಿವಿಧ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸುವಂತೆ ಕೋರಿ.

ಪ್ರಧಾನ. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಸಿಟಿ, ಬೆಂಗಳೂರು ಗ್ರಾಮಾಂತರ, ಮೈಸೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಢ ಗದಗ, ಹಾಸನ, ಹಾವೇರಿ, ಕೊಡಗು, ಕೋಲಾರ, ಕಲಬುರಗಿ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಯಾದಗಿರಿ ಮತ್ತು ಕಾರವಾರ ಇವರಿಗೆ, ನೇಮಕಾತಿ ಅದಿಸೂಚನೆಯನ್ನು ತಮ್ಮ ನ್ಯಾಯಾಲಯದ

ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ ಮತ್ತು ವಿಲೇಖನಾಧಿಕಾರಿಗಳು ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು, ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.

3. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ ಕೊಪ್ಪಳ.
4. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಗಂಗಾವತಿ/ಯಲಬುರ್ಗಾ/ಕುಷ್ಟಗಿ
5. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಯಲಬುರ್ಗಾ
6. ಪ್ರಧಾನ ಮತ್ತು ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಗಂಗಾವತಿ/ಕುಷ್ಟಗಿಕೊಪ್ಪಳ
7. **ಉದ್ಯೋಗ ಅಧಿಕಾರಿ,ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಕೊಪ್ಪಳ**
8. ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿ ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ಸರ್ಕಾರಿ ಹೊರವಲಯ ಮತ್ತು ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು- 560059.

9 ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.

## ಅರ್ಜಿ ನಮೂನೆ

| ಇತ್ತೀಚಿನ ಭಾವ ಚಿತ್ರ ಲಗತ್ತಿಸಬೇಕು. |
|---|

ಮಾನ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಪ್ಪಳ ಜಿಲ್ಲೆ, ಕೊಪ್ಪಳ- ಇವರಿಗೆ.

ಮಾನ್ಯರೇ,

ಕೊಪ್ಪಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆ 3/2018 ದಿನಾಂಕಃ 27-9-2018 ರ ಪ್ರಕಾರ ಶೀಘ್ರಲಿಪಿಗಾರರ ಹುದ್ದೆಗೆ ನಾನು ಈ ಮೂಲಕ ನನ್ನ ವಿವರದೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ.

| | | |
|---|---|---|
| 1 | ಅಭ್ಯರ್ಥಿಯ ಹೆಸರು | |
| 2 | ತಂದೆಯ ಹೆಸರು / ತಾಯಿಯ ಹೆಸರು<br>ವಿವಾಹಿತರಾಗಿದ್ದರೆ ಗಂಡನ ಅಥವಾ ಹೆಂಡತಿಯ ಹೆಸರು | |
| 3 | ಪೂರ್ಣ ವಿಳಾಸ ಮತ್ತು ಮೊಬೈಲ್ ಸಂಖ್ಯೆ | |
| 4 | ಜನ್ಮ ದಿನಾಂಕ ಮತ್ತು ವಯಸ್ಸು | |
| 5 | ಲಿಂಗ | ಪುರುಷ/ ಮಹಿಳೆ |
| 6 | ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದಕ್ಕೆ ಸೇರಿದ ಅಭ್ಯರ್ಥಿ ಯೇ ಅಥವಾ<br>ಉಳಿಕೆ ಮೂಲ ವೃಂದಕ್ಕೆ | |
| 7 | ಯಾವ ಮೀಸಲಾತಿಯಡಿಯಲ್ಲಿ ಈ ಅರ್ಜಿ ಸಲ್ಲಿಸತ್ತಿರುವಿರಿ | |
| 8 | ರಾಷ್ಟ್ರೀಯತೆ ಃ<br>ಜಾತಿ/ ಉಪಜಾತಿಃ | |

| | | | | | |
|---|---|---|---|---|---|
| 9 | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು:- (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | | | | |
| | ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ | ಗರಿಷ್ಠ ಅಂಕಗಳು | ಪಡೆದಿರುವ ಅಂಕಗಳು | ಶೇಕಡವಾರು ಅಂಕಗಳು |
| ಎ | ಎಸ್.ಎಸ್.ಎಲ್.ಸಿ/ ತತ್ಸಮಾನ ಪರೀಕ್ಷೆ | | | | |
| ಬಿ | ಹಿರಿಯ ದರ್ಜೆಯ ಆಂಗ್ಲ ಬೆರಳಚ್ಚು ಪರೀಕ್ಷೆ | | | | |
| ಸಿ | ಹಿರಿಯ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಡಿ | ಹಿರಿಯ ದರ್ಜೆಯ ಆಂಗ್ಲ ಶೀಘ್ರಲಿಪಿ ಪರೀಕ್ಷೆ | | | | |
| ಇ | ಹಿರಿಯ ದರ್ಜೆಯ ಕನ್ನಡ ಶೀಘ್ರಲಿಪಿ ಪರೀಕ್ಷೆ | | | | |
| ಎಫ್ | ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ | | | | |
| 10 | ಜಾತಿ /ಪಂಗಡ/ಗ್ರಾಮೀಣ / ಮಾಜಿಸೈನಿಕ / ಅಂಗವಿಕಲ ಮೀಸಲಾತಿ ಸೌಲಭ್ಯ ಪಡೆಯ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ | | | | |
| 11 | ಸಲ್ಲಿಸಲು ಇಚ್ಛೆ ಪಡುವ ಇತರ ಯಾವುದಾದರು ವಿವರಗಳು | | | | |

ಸೂಚನೆ:- ಅಭ್ಯರ್ಥಿಯು ತನಗೆ ಅನ್ವಯವಾಗದ್ದನ್ನು ಹೊಡೆದು ಹಾಕತಕ್ಕದ್ದು.

## ಘೋಷಣೆ

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ನಾನು ಬದ್ಧನಾಗಿರುತ್ತೇನೆ/ ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಕೊಪ್ಪಳ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ/ಸಿದ್ಧಳಿದ್ದೇನೆ.

ಸ್ಥಳ:

ದಿನಾಂಕ: ಅಭ್ಯರ್ಥಿಯ ಸಹಿ.

## ಅಭ್ಯರ್ಥಿಯು ಸರ್ಕಾರಿ ನೌಕರನಾಗಿದ್ದ ಪಕ್ಷದಲ್ಲಿ ನೇಮಕಾತಿ ಪ್ರಾಧಿಕಾರಗಳ ದೃಢೀಕರಣ ಪತ್ರ

ಶ್ರೀ/ಶ್ರೀಮತಿ ...........................................ಇವರು ನಮ್ಮ ಇಲಾಖೆಯಲ್ಲಿ ದಿನಾಂಕ:..........................ರಿಂದ...................................ರ ವರೆಗೆ ಸೇವೆ ಸಲ್ಲಿಸುತ್ತಿದ್ದು ಅಭ್ಯರ್ಥಿಯ ನಡತೆಯು ಉತ್ತಮವಾಗಿದ್ದು...........................ಈ ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡಲಾಗಿದೆ.

ಸ್ಥಳ: ಸಹಿ:

ಪದನಾಮ:

ದಿನಾಂಕ: ಕಛೇರಿಯ ಮೊಹರು:

---